Akashvani: Bangalore
National Bulletin In Kannada
07.05.2026: 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

07.05.2026: 13.10hrs

********

**ಮುಖ್ಯಾಂಶಗಳು :**

1. ಆಪರೇಷನ್ ಸಿಂದೂರ್‌ಗೆ ಒಂದು ವರ್ಷ: ಇಡೀ ದೇಶವು ನಮ್ಮ ಸೈನಿಕರ ಅದಮ್ಯ ಶೌರ್ಯ, ಬಲಿದಾನ ಮತ್ತು ವೃತ್ತಿಪರತೆಗೆ ನಮನ ಸಲ್ಲಿಸಲಿದೆ - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಪ್ರಧಾನಮಂತ್ರಿ ಉದ್ಯೋಗ ಸೃಜನೆ ಕಾರ್ಯಕ್ರಮ: ೩೯.೩೩ ಲಕ್ಷ ಉದ್ಯೋಗಾವಕಾಶಗಳ ಸೃಷ್ಟಿ, ಮಹಿಳಾ ಸಬಲೀಕರಣಕ್ಕೆ ಒತ್ತು
3. ದೇಶದಲ್ಲಿ ತಾಯಿ ಮತ್ತು ಮಗುವಿನ ಆರೋಗ್ಯ ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದಿಂದ 'ಜನನಿ' ಡಿಜಿಟಲ್ ವೇದಿಕೆ ಆರಂಭ
4. ತಮಿಳುನಾಡಿನಲ್ಲಿ ಸರ್ಕಾರ ರಚನೆ ಕುರಿತಂತೆ ರಾಜ್ಯಪಾಲರನ್ನು ಇಂದು ಮತ್ತೊಮ್ಮೆ ಭೇಟಿಯಾದ ಟಿವಿಕೆ ಪಕ್ಷದ ಮುಖ್ಯಸ್ಥ ಜೋಸೆಫ್ ವಿಜಯ್
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಲಖನೌ ಸೂಪರ್ ಜೈಂಟ್ಸ್ ತಂಡಗಳ ಮುಖಾಮುಖಿ

**********

ಆಪರೇಷನ್ ಸಿಂದೂರ್ ಕಾರ್ಯಾಚರಣೆಯು ಭಯೋತ್ಪಾದನೆ ಮತ್ತು ನಮ್ಮ ಸಾರ್ವಭೌಮತ್ವ ಹಾಗೂ ನಾಗರಿಕರ ಸುರಕ್ಷತೆಗೆ ಧಕ್ಕೆ ತರುವ ಎಲ್ಲಾ ಶಕ್ತಿಗಳ ವಿರುದ್ಧ ಭಾರತಕ್ಕಿರುವ ಅಚಲ ನಿರ್ಧಾರಕ್ಕೆ ಸಾಕ್ಷಿಯಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ಆಪರೇಷನ್ ಸಿಂದೂರ್ ಪೂರ್ಣಗೊಂಡು ಒಂದು ವರ್ಷ ತುಂಬಿದ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಈ ಮಿಷನ್‌ನ ಅಸಾಧಾರಣ ಯಶಸ್ಸು ನಮ್ಮ ಸಶಸ್ತ್ರ ಪಡೆಗಳ

ಸಾಟಿಯಿಲ್ಲದ ಶೌರ್ಯ ಮತ್ತು ದೃಢಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಇಂದು ಇಡೀ ದೇಶವು ನಮ್ಮ ಸೈನಿಕರ ಅದಮ್ಯ ಶೌರ್ಯ, ಬಲಿದಾನ ಮತ್ತು ವೃತ್ತಿಪರತೆಗೆ ನಮನ ಸಲ್ಲಿಸುತ್ತದೆ ಎಂದು ರಾಷ್ಟ್ರಪತಿ ಮುರ್ಮು ಹೇಳಿದ್ದಾರೆ. ಭಾರತದ ಶಾಂತಿ, ಏಕತೆ ಮತ್ತು ಸಾರ್ವಭೌಮತ್ವಕ್ಕೆ ಧಕ್ಕೆ ತರಲು ಯತ್ನಿಸುತ್ತಿರುವ ಭಯೋತ್ಪಾದಕ ಶಕ್ತಿಗಳು ಮತ್ತು ಭಯೋತ್ಪಾದನೆಗೆ ಕುಮ್ಮಕ್ಕು ನೀಡುವ ದೇಶಗಳಿಗೆ ಭಾರತವು ದಿಟ್ಟವಾಗಿ ಪ್ರತ್ಯುತ್ತರ ನೀಡಿದ ಐತಿಹಾಸಿಕ ಕ್ಷಣ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಆಪರೇಷನ್ ಸಿಂದೂರ್ ಅನ್ನು ಬಣ್ಣಿಸಿದ್ದಾರೆ.

**********

ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಿ, ಅದನ್ನು ಬೆಂಬಲಿಸುವ ವ್ಯವಸ್ಥೆಯನ್ನು ಧ್ವಂಸಗೊಳಿಸುವಲ್ಲಿ ದೇಶ ತನ್ನ ಸಂಕಲ್ಪದಲ್ಲಿ ಅಚಲವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. 'ಆಪರೇಷನ್ ಸಿಂದೂರ್' ಪೂರ್ಣಗೊಂಡು ಒಂದು ವರ್ಷವಾದ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರಮೋದಿಯವರು, ಕಾರ್ಯಾಚರಣೆಯ ವೇಳೆ ಭಾರತೀಯ ಸಶಸ್ತ್ರ ಪಡೆಗಳು ಅಪೂರ್ವ ಧೈರ್ಯ, ನಿಖರತೆ ಮತ್ತು ದೃಢಸಂಕಲ್ಪವನ್ನು ಪ್ರದರ್ಶಿಸಿದ್ದವೆಂದು ಹೇಳಿದ್ದಾರೆ. ಪಹಲ್ಗಾಮ್‌ನಲ್ಲಿ ಅಮಾಯಕ ಭಾರತೀಯರ ಮೇಲೆ ದಾಳಿ ನಡೆಸಲು ಸಾಹಸ ಮಾಡಿದವರಿಗೆ ಭಾರತೀಯ ಪಡೆಗಳು ತಕ್ಕ ಪ್ರತಿಕ್ರಿಯೆ ನೀಡಿವೆ .ಸಶಸ್ತ್ರ ಪಡೆಗಳ ಶೌರ್ಯ ಮತ್ತು ತ್ಯಾಗಕ್ಕೆ ದೇಶದ ಸಮಸ್ತ ಜನತೆ ಗೌರವ ಸಲ್ಲಿಸುತ್ತಿದೆ ಎಂದು ಅವರು ಹೇಳಿದ್ದಾರೆ. ಈ ನಡುವೆ, ತಮ್ಮ ಸಂಸ್ಕೃತ ಸುಭಾಷಿತದಲ್ಲಿ ಪ್ರಧಾನಮಂತ್ರಿಯವರು, 'ಆಪರೇಷನ್ ಸಿಂದೂರ್'ನಲ್ಲಿ ಭಾರತ ಸಾಧಿಸಿದ ಅಸಾಧಾರಣ ವಿಜಯವು ದೇಶದ ಕೆಚ್ಚೆದೆಯ ಸೈನಿಕರ ಅದ್ಭುತ ಶೌರ್ಯ ಮತ್ತು ದೇಶಭಕ್ತಿಗೆ ಒಂದು ಸ್ಫೂರ್ತಿದಾಯಕ ಉದಾಹರಣೆಯಾಗಿದೆ ಎಂದು ಹೇಳಿದರು. ಭಾರತೀಯ ಸೇನೆಯು ಇಂದು 'ಆಪರೇಷನ್ ಸಿಂದೂರ್' ಕಾರ್ಯಾಚರಣೆಗೆ ಒಂದು ವರ್ಷ ತುಂಬಿದ ಹಿನ್ನೆಲೆಯಲ್ಲಿ ವಿಶೇಷ ವೀಡಿಯೊವೊಂದನ್ನು ಹಂಚಿಕೊಂಡಿದೆ. ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಗೆ ಭಾರತ ನೀಡಿದ ಯೋಜಿತ ಮತ್ತು ನಿಖರವಾದ ಪ್ರತ್ಯುತ್ತರವನ್ನು ಈ ವೀಡಿಯೊ ಒಳಗೊಂಡಿದೆ.ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ನೀಡಿರುವ ಭಾರತೀಯ ಸೇನೆಯು, ದೇಶದ ದೃಢವಾದ ಪ್ರತಿಕ್ರಿಯೆಯನ್ನು ಎತ್ತಿ ತೋರಿಸಿದೆ. ಅಷ್ಟೇ ಅಲ್ಲದೆ,

ದೇಶದ ಸಾರ್ವಭೌಮತ್ವ ಮತ್ತು ನಾಗರಿಕರನ್ನು ರಕ್ಷಿಸುವ ತನ್ನ ಬದ್ಧತೆಯನ್ನು ಸೇನೆಯು ಈ ಸಂದರ್ಭದಲ್ಲಿ ಪುನರುಚ್ಚರಿಸಿದೆ.

**********

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಆಪರೇಷನ್ ಸಿಂದೂರ್ ಕಾರ್ಯಾಚರಣೆಯನ್ನು ಭಾರತದ ಇತಿಹಾಸದಲ್ಲಿ ಒಂದು ಯುಗಪ್ರವರ್ತಕ ಮೈಲಿಗಲ್ಲು ಎಂದು ಬಣ್ಣಿಸಿದ್ದಾರೆ.

**********

ಆಪರೇಷನ್ ಸಿಂದೂರ್ ಕಾರ್ಯಾಚರಣೆಯು ಇಂದು ಒಂದು ವರ್ಷವನ್ನು ಪೂರೈಸುತ್ತಿರುವ ಹಿನ್ನೆಲೆಯಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾರತೀಯ ಸಶಸ್ತ್ರ ಪಡೆಗಳ ಶೌರ್ಯವನ್ನು ಗೌರವಿಸಲು ತಮ್ಮ ಸಾಮಾಜಿಕ ಜಾಲತಾಣಗಳ ಪ್ರೊಫೈಲ್ ಚಿತ್ರವನ್ನು ಬದಲಾಯಿಸಿದ್ದಾರೆ. ನಮ್ಮ ಪಡೆಗಳಿಗೆ ಮತ್ತು ಆಪರೇಷನ್ ಸಿಂದೂರ್ ಸಮಯದಲ್ಲಿ ಅವರು ಸಾಧಿಸಿದ ಯಶಸ್ಸಿಗೆ ಗೌರವ ಸಲ್ಲಿಸುವ ಸೂಚಕವಾಗಿ, ದೇಶದ ಎಲ್ಲಾ ನಾಗರಿಕರು ತಮ್ಮ ಸಾಮಾಜಿಕ ಜಾಲತಾಣಗಳ ಪ್ರೊಫೈಲ್ ಚಿತ್ರಗಳನ್ನು ಬದಲಾಯಿಸಿಕೊಳ್ಳುವಂತೆ ಅವರು ಕರೆ ನೀಡಿದ್ದಾರೆ. ಪ್ರಧಾನಮಂತ್ರಿಯವರ ಜೊತೆಗೆ ಅವರ ಸಂಪುಟ ಸಹೋದ್ಯೋಗಿಗಳು ಸಹ ತಮ್ಮ ಎಲ್ಲಾ ಸಾಮಾಜಿಕ ಜಾಲತಾಣ ಖಾತೆಗಳ ಪ್ರೊಫೈಲ್ ಚಿತ್ರಗಳನ್ನು ಬದಲಾಯಿಸಿದ್ದಾರೆ.

**********

ದೇಶಾದ್ಯಂತ ಜೀವನೋಪಾಯದ ಮಾರ್ಗಗಳನ್ನು ಸೃಷ್ಟಿಸುವಲ್ಲಿ ಮತ್ತು ತಳಮಟ್ಟದ ಆರ್ಥಿಕ ಅಭಿವೃದ್ಧಿಗೆ ಕೊಡುಗೆ ನೀಡುವಲ್ಲಿ ಪ್ರಧಾನಮಂತ್ರಿಯವರ ಉದ್ಯೋಗ ಸೃಜನೆ ಕಾರ್ಯಕ್ರಮವು ಸುಮಾರು ೩೬.೩೩ ಲಕ್ಷ ವ್ಯಕ್ತಿಗಳಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಿಕೊಟ್ಟಿದೆ ಎಂದು ಸರ್ಕಾರ ಇಂದು ತಿಳಿಸಿದೆ. ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವಾಲಯದ ಈ ಪ್ರಮುಖ ಯೋಜನೆಯನ್ನು ಖಾದಿ ಮತ್ತು ಗ್ರಾಮೋದ್ಯೋಗ ಆಯೋಗವು ಜಾರಿಗೊಳಿಸುತ್ತಿದ್ದು, ದೇಶದಲ್ಲಿ ಉದ್ಯಮಶೀಲತೆ ಮತ್ತು ಉದ್ಯೋಗ ಸೃಜನೆಯನ್ನು ಉತ್ತೇಜಿಸುವಲ್ಲಿ ಇದು ಪ್ರಮುಖ ಪಾತ್ರ ವಹಿಸುತ್ತಿದೆ. ೧೫ನೇ ಹಣಕಾಸು ಆಯೋಗದ ಅವಧಿಯಲ್ಲಿ ಈ ಯೋಜನೆಯು ಅತ್ಯುತ್ತಮ

ಪ್ರದರ್ಶನ ನೀಡಿದ್ದು, ಭಾರತದ ಸೂಕ್ಷ್ಮ ಉದ್ಯಮ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ತನ್ನ ಕೊಡುಗೆಯನ್ನು ಮರುಸ್ಥಾಪಿಸಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

**********

ದೇಶದಲ್ಲಿ ತಾಯಿ ಮತ್ತು ಮಗುವಿನ ಆರೋಗ್ಯ ಸೇವೆಗಳನ್ನು ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು 'ಜನನಿ' ಎಂಬ ಮಹತ್ವದ ಉಪಕ್ರಮವನ್ನು ಪ್ರಾರಂಭಿಸಿದೆ. 'ಜನನಿ' ಎಂಬುದು ಮಹಿಳೆಯರ ಸಂತಾನೋತ್ಪತ್ತಿ ಸಮಯದಲ್ಲಿ ಅವರ ಆರೋಗ್ಯ ದಾಖಲೆಗಳನ್ನು ಸಮಗ್ರವಾಗಿ ಮೇಲ್ವಿಚಾರಣೆ ಮಾಡಲು ಮತ್ತು ಡಿಜಿಟಲ್ ರೂಪದಲ್ಲಿ ನಿರ್ವಹಿಸಲು ವಿನ್ಯಾಸಗೊಳಿಸಲಾದ ಒಂದು ಡಿಜಿಟಲ್ ವೇದಿಕೆಯಾಗಿದೆ. ಸಚಿವಾಲಯವು ನೀಡಿರುವ ಮಾಹಿತಿಯ ಪ್ರಕಾರ, ಈವರೆಗೆ ಒಂದು ಕೋಟಿ ೩೪ ಲಕ್ಷ ಫಲಾನುಭವಿಗಳು ಈ ವೇದಿಕೆಯಲ್ಲಿ ನೋಂದಾಯಿಸಿಕೊಂಡಿದ್ದಾರೆ. ಗರ್ಭಪೂರ್ವ ಆರೈಕೆ, ಹೆರಿಗೆ, ಹೆರಿಗೆಯ ನಂತರದ ಆರೈಕೆ, ನವಜಾತ ಶಿಶುವಿನ ಆರೈಕೆ, ಮನೆ ಆಧಾರಿತ ಶಿಶು ಮತ್ತು ಸಣ್ಣ ಮಕ್ಕಳ ಆರೈಕೆ ಹಾಗೂ ಕುಟುಂಬ ಯೋಜನೆಯನ್ನು ಒಳಗೊಂಡಂತೆ ತಾಯಿ ಮತ್ತು ಮಗುವಿನ ಆರೋಗ್ಯ ಸೇವೆಗಳನ್ನು ಸುಗಮವಾಗಿ ಪತ್ತೆಹಚ್ಚುವ ಗುರಿಯನ್ನು ಈ ಯೋಜನೆ ಹೊಂದಿದೆ.

**********

ತಮಿಳುನಾಡಿನಲ್ಲಿ ಸರ್ಕಾರ ರಚನೆಯ ಕುರಿತು ರಾಜಕೀಯ ಚಟುವಟಿಕೆಗಳು ಚುರುಕುಗೊಂಡಿದ್ದು, ಟಿವಿಕೆ ಪಕ್ಷದ ಮುಖ್ಯಸ್ಥ ಜೋಸೆಫ್ ವಿಜಯ್ ಅವರು ಇಂದು 'ಲೋಕ್ ಭವನ್'ನಲ್ಲಿ ರಾಜ್ಯಪಾಲ ವಿಶ್ವನಾಥ್ ಅರ್ಲೇಕರ್ ಅವರನ್ನು ಎರಡನೇ ಬಾರಿಗೆ ಭೇಟಿ ಮಾಡಿದರು. ರಾಜ್ಯಪಾಲರೇ ಅವರನ್ನು ಮಾತುಕತೆಗೆ ಕರೆದಿದ್ದರು ಎಂದು ಹೇಳಲಾಗುತ್ತಿದೆ. ವಿಜಯ್ ಅವರು ನಿನ್ನೆಯೂ ಸಹ ರಾಜ್ಯಪಾಲರನ್ನು ಭೇಟಿ ಮಾಡಿ ತಮ್ಮ ಪಕ್ಷದ ಶಾಸಕರ ಪಟ್ಟಿ ಮತ್ತು ಕಾಂಗ್ರೆಸ್ ನೀಡಿದ ಬೆಂಬಲ ಪತ್ರವನ್ನು ಸಲ್ಲಿಸಿದ್ದರು. ಸದ್ಯದ ಪರಿಸ್ಥಿತಿಯಲ್ಲಿ ಬಹುಮತ ಸಾಬೀತುಪಡಿಸಲು ಅವರಿಗೆ ಇನ್ನೂ ಹೆಚ್ಚಿನ ಬೆಂಬಲದ ಅಗತ್ಯವಿದೆ. ಈ ನಡುವೆ, ವಿಸಿಕೆ ನಾಯಕ ತಿರುಮಾವಳವನ್ ಅವರು ಇಂದು ನಡೆಯಲಿರುವ ತಮ್ಮ ಶಾಸಕಾಂಗ ಪಕ್ಷದ ಸಭೆಯ ನಂತರ ವಿಜಯ್ ಅವರಿಗೆ ಬೆಂಬಲ ನೀಡುವ ಬಗ್ಗೆ ನಿರ್ಧರಿಸಲಾಗುವುದು ಎಂದು ತಿಳಿಸಿದ್ದಾರೆ. ವಿಸಿಕೆ ಪಕ್ಷವು ಇಬ್ಬರು ಶಾಸಕರನ್ನು ಹೊಂದಿದೆ.

**********

ವಿಯೆಟ್ನಾಂ ಅಧ್ಯಕ್ಷ ಟೋ ಲ್ಯಾಮ್ ಅವರು ಇಂದು ತಮ್ಮ ಒಂದು ದಿನದ ಮುಂಬೈ ಭೇಟಿಯ ಸಂದರ್ಭದಲ್ಲಿ ರಾಷ್ಟ್ರೀಯ ಷೇರು ಮಾರುಕಟ್ಟೆಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಅಧ್ಯಕ್ಷ ಲ್ಯಾಮ್ ಅವರು ಭಾರತದ ಷೇರು ಮಾರುಕಟ್ಟೆಯ ಬಲವನ್ನು ಶ್ಲಾಘಿಸಿದರು. ಇಂದು ಸಂಜೆ ಅಧ್ಯಕ್ಷ ಟೋ ಲ್ಯಾಮ್ ಅವರು ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರನ್ನು ಭೇಟಿ ಮಾಡಲಿದ್ದಾರೆ. ಬಳಿಕ, ಉಭಯ ನಾಯಕರು 'ಬಿಸಿನೆಸ್ ಫೋರಂ'ನಲ್ಲಿ ಭಾಗವಹಿಸಲಿದ್ದು, ಅಲ್ಲಿ ವಿಯೆಟ್ನಾಂ ಅಧ್ಯಕ್ಷರು ಭಾಷಣ ಮಾಡಲಿದ್ದಾರೆ.

**********

ಹೊಸ ಕಾರ್ಮಿಕ ಸಂಹಿತೆಗಳ ಅಡಿಯಲ್ಲಿ ೪೦ ವರ್ಷ ದಾಟಿದ ಕಾರ್ಮಿಕರಿಗಾಗಿ ರಾಷ್ಟ್ರವ್ಯಾಪಿ ವಾರ್ಷಿಕ ಆರೋಗ್ಯ ತಪಾಸಣೆ ಯೋಜನೆಯನ್ನು ಇಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ.ಮನ್ಸುಖ್ ಮಾಂಡವೀಯ ಉದ್ಘಾಟಿಸಿದರು. ನವದೆಹಲಿಯ ಇಎಸ್‌ಐಸಿ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ದೇಶದ ಕಾರ್ಯಪಡೆಗೆ ಸಿಗುತ್ತಿರುವ ಗೌರವ ಮತ್ತು ಸಾಮಾಜಿಕ ಭದ್ರತೆ ಹೆಚ್ಚಾಗಿದೆ ಎಂದು ತಿಳಿಸಿದರು. ಕಳೆದ ೧೨ ವರ್ಷಗಳಲ್ಲಿ ಸರ್ಕಾರದ ವಿವಿಧ ಪ್ರಯತ್ನಗಳಿಂದಾಗಿ ನಿರುದ್ಯೋಗ ದರವು ಶೇಕಡಾ ೩.೨ಕ್ಕೆ ಇಳಿಕೆಯಾಗಿದೆ ಎಂದು ಅವರು ಉಲ್ಲೇಖಿಸಿದರು. ದಶಕದ ಹಿಂದೆ ೩೦ ಕೋಟಿ ಇದ್ದ ಸಾಮಾಜಿಕ ಭದ್ರತಾ ಯೋಜನೆಗಳ ವ್ಯಾಪ್ತಿಯು ಈಗ ೯೪ ಕೋಟಿಗೆ ತಲುಪಿದೆ ಎಂದು ಸಚಿವರು ಮಾಹಿತಿ ನೀಡಿದರು. ಇದೇ ಅವಧಿಯಲ್ಲಿ ಇಎಸ್‌ಐಸಿ ಯೋಜನೆಯ ಫಲಾನುಭವಿಗಳ ಸಂಖ್ಯೆಯು ೭ ಕೋಟಿಯಿಂದ ೧೫ ಕೋಟಿಗೆ ಏರಿಕೆಯಾಗಿದ್ದು, ಇದು ಕಾರ್ಮಿಕರಿಗೆ ತುರ್ತು ವೈದ್ಯಕೀಯ ನೆರವು, ಮಾತೃತ್ವ ಸೌಲಭ್ಯ ಮತ್ತು ಉದ್ಯೋಗ ನಷ್ಟದ ಸಮಯದಲ್ಲಿ ಆರ್ಥಿಕ ಸಹಾಯವನ್ನು ನೀಡುತ್ತಿದೆ ಎಂದು ಅವರು ವಿವರಿಸಿದರು.

**********

ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

*****END*****